# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ***ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 14-01-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು***

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಶ್ರೀ ದವಲ್, ಇಂಜಿನಿಯರ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕೆ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)** ರವರು ಮಾತನಾಡಿ, ವಾರ್ಡಿನ ಪ್ರಮುಖ ರಸ್ತೆಗಳಾದ ಕಮ್ಮನಹಳ್ಳಿ ಮುಖ್ಯರಸ್ತೆ ಹಾಗೂ ಹೆಣ್ಣೂರು ಮುಖ್ಯರಸ್ತೆಗಳ ಪಾದಾಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡು ವ್ಯಾಪಾರ ವಹಿವಾಟು ಮಾಡುತ್ತಿದ್ದು, ಸಾರ್ವಜನಿಕರಿಗೆ ಹಾಗೂ ಹಿರಿಯ ನಾಗರೀಕರಿಗೆ ಪಾದಾಚಾರಿ ಮಾರ್ಗದಲ್ಲಿ ಓಡಾಡಲು ಕಷ್ಟಕರವಾಗಿರುತ್ತದೆ ಎಂದು ಹಿಂದಿನ ಸಭೆಯಲ್ಲಿ ತಿಳಿಸಿರುತ್ತಾರೆ. ಈ ಬಗ್ಗೆ ವಿದ್ಯುತ್ ಹಾಗೂ ಕಂದಾಯ ವಿಭಾಗದ ವತಿಯಿಂದ ಕಮ್ಮನಹಳ್ಳಿ ಮುಖ್ಯರಸ್ತೆ ಹಾಗೂ ಹೆಣ್ಣೂರು ಮುಖ್ಯರಸ್ತೆಗಳ ಪಾದಾಚಾರಿ ಮಾರ್ಗದ ಒತ್ತುವರಿ ಸ್ಥಳಗಳನ್ನು ಪೊಲೀಸರ ಸಹಯೋಗದೊಂದಿಗೆ ತೆರವುಕಾರ್ಯಾಚರಣೆ ಕೈಗೊಳ್ಳಲಾಗಿರುತ್ತದೆ ಎಂದು ಸಭೆಗೆ ತಿಳಿಸಲಾಯಿತು.

Scanned with CamScanner

2) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),** ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ರಾಮಯ್ಯ ಬಡಾವಣೆ ಹಾಗೂ ಕಮ್ಮನಹಳ್ಳಿ ಪ್ರದೇಶದಲ್ಲಿ ಸುಮಾರು ಎಂಟು (08) ವಿದ್ಯುತ್ ದೀಪಗಳು ಉರಿಯದೇ ಇರುವ ಬಗ್ಗೆ ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಬೀದಿ ದೀಪಗಳ ವಿಭಾಗದವರು ಗೈರು ಹಾಜರಾಗಿದ್ದು, ಈ ಬಗ್ಗೆ ಮಾಹಿತಿ ನೀಡಿ, ದುರಸ್ತಿ ಪಡಿಸುವುದಾಗಿ ಸಭೆಗೆ ತಿಳಿಸಲಾಯಿತು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),** ರವರು ಮಾತನಾಡಿ ವಾರ್ಡ್ ಪ್ರದೇಶದ ಉದ್ಯಾನವನಗಳಲ್ಲಿ ಹಲವು ಪ್ರದೇಶದ ಉದ್ಯಾನವನಗಳನ್ನು ಸ್ವಚ್ಛಗೊಳಿಸುತ್ತಿರುವುದಿಲ್ಲ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ತೋಟಗಾರಿಕಾ ಇಲಾಖೆಯವರು ಪ್ರಸ್ತುತ ಎಲ್ಲಾ ಉದ್ಯಾನವನಗಳ ಸ್ವಚ್ಛತೆಗಾಗಿ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ ಎಂದು ಸಭೆಗೆ ತಿಳಿಸಿದರು.

4) **ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು** ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಒಟ್ಟು 15 ಕೋವಿಡ್ ಸೋಂಕಿತ ಪ್ರಕರಣಗಳಿದ್ದು, ಈ ಪೈಕಿ 02 ಪ್ರಕರಣಗಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಒಟ್ಟು 57100 ಪರೀಕ್ಷೆಗಳನ್ನು ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 55240 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು<br>ಸಹಾಯಕ ಅಭಿಯಂತರರು<br>ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ | Prasanna Kumar. A<br>ಅಧ್ಯಕ್ಷರು<br>(ನೋಡೆಲ್ ಅಧಿಕಾರಿಗಳು)<br>ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ |

**ಪ್ರತಿಯನ್ನು**

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner